# Akashvani : Bangalore
# National Bulletin In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**21.06.2024 / 19.35 hrs**

ಮುಖ್ಯಾಂಶಗಳು

೧. **ದೇಶ-ವಿದೇಶಗಳಲ್ಲಿ ಹತ್ತನೇ ಅಂತಾರಾಷ್ಟ್ರೀಯ ಯೋಗ ದಿನ ಆಚರಣೆ; ಗಣ್ಯರು ಭಾಗಿ**

೨. **ಆಕಾಶವಾಣಿ- ಭಾರತದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಸಂಸ್ಥೆ; ರಾಯಿಟರ್ಸ್ ಸಮೀಕ್ಷೆಯಲ್ಲಿ ಉಲ್ಲೇಖ**

೩. **ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್‌ಗೆ ನೀಡಿರುವ ಜಾಮೀನಿಗೆ ದೆಹಲಿ ಹೈಕೋರ್ಟ್ ತಡೆ**

೪. **ಹಜ್ ಯಾತ್ರೆಯಲ್ಲಿ ೯೮ ಭಾರತೀಯ ಯಾತ್ರಿಕರ ಸಾವು: ವಿದೇಶಾಂಗ ಸಚಿವಾಲಯ ಮಾಹಿತಿ**

೫. **ಡಬ್ಲ್ಯು ಟಿಎ ವೆನಿಟೊ ಓಪನ್ ಟೆನಿಸ್: ಭಾರತದ ಅಂಕಿತಾ ರೈನಾ ಮತ್ತು ಸ್ವಿಟ್ಜರ್ಲೆಂಡ್‌ನ ಸುಸಾನ್ ಬಾಂಡೆಚ್ಚಿ ಮುಖಾಮುಖಿ**

**<><*<><>*><>**

ಹತ್ತನೇ ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಜಾಗತಿಕ ಸಮುದಾಯಕ್ಕೆ, ವಿಶೇಷವಾಗಿ ಭಾರತದ ನಾಗರಿಕರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಶುಭಾಶಯ ಕೋರಿದ್ದಾರೆ. ಯೋಗವು ಮನುಕುಲಕ್ಕೆ ಭಾರತದ ಅನನ್ಯ ಕೊಡುಗೆಯಾಗಿದೆ. ಹೆಚ್ಚುತ್ತಿರುವ ಜೀವನಶೈಲಿ ಸಂಬಂಧಿತ ಸಮಸ್ಯೆಗಳ ದೃಷ್ಟಿಯಿಂದ, ಯೋಗ ಇಂದು ಹೆಚ್ಚು ಮಹತ್ವ ಪಡೆದಿದೆ. ಯೋಗವು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಯೋಗಕ್ಷೇಮಕ್ಕೆ ಉತ್ತಮ ಮಾರ್ಗವಾಗಿದ್ದು, ಎಲ್ಲರೂ ಯೋಗವನ್ನು ದೈನಂದಿನ ಜೀವನದ ಅವಿಭಾಜ್ಯ ಅಂಗವಾಗಿ ಅಳವಡಿಸಿಕೊಳ್ಳಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ಯೋಗವು ಯಾವುದೇ ನಿರ್ದಿಷ್ಟ ಪಂಗಡ ಅಥವಾ ಧರ್ಮಕ್ಕೆ ಸಂಬಂಧಿಸಿದ್ದಲ್ಲ ಎಂದು ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಹೇಳಿದ್ದಾರೆ. ಯೋಗಾಭ್ಯಾಸವು ಜನರು ಮತ್ತು ಸಮುದಾಯಗಳನ್ನು ಒಂದುಗೂಡಿಸುತ್ತದೆ ಮತ್ತು ಒಂದು ರಾಷ್ಟ್ರವನ್ನು ಮತ್ತೊಂದು ರಾಷ್ಟ್ರದೊಂದಿಗೆ ಬೆಸೆಯುವ ಸಾಮರ್ಥ್ಯವನ್ನು ಹೊಂದಿದೆ. ಯೋಗವು ದೇಹ, ಮನಸ್ಸು ಮತ್ತು ಆತ್ಮದ ಏಕತೆಯಾಗಿದ್ದು, ಆರೋಗ್ಯಪೂರ್ಣ ಜೀವನವನ್ನು ನಡೆಸಲು ಒಂದು ಮಾರ್ಗವಾಗಿದೆ. ಯೋಗವು ವ್ಯಕ್ತಿಯ ಮನಸ್ಸು ಮತ್ತು ಆತ್ಮವನ್ನು ಆರೋಗ್ಯವಾಗಿಡುತ್ತದೆ ಎಂದು ಅವರು ಹೇಳಿದ್ದಾರೆ.

**<><*<><>*><>**

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಜಮ್ಮು-ಕಾಶ್ಮೀರದ ಶ್ರೀನಗರದಲ್ಲಿನ ಅಂತಾರಾಷ್ಟ್ರೀಯ ಸಮಾವೇಶ ಕೇಂದ್ರದಲ್ಲಿ ಮುಖ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ದಾಲ್ ಸರೋವರದ ತೀರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಸುಮಾರು ೭ ಸಾವಿರ ಜನರು ಈ ಯೋಗೋತ್ಸವದಲ್ಲಿ ಪಾಲ್ಗೊಂಡಿದ್ದರು. ಇದೇ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ ಅವರು, ಅಂತಾರಾಷ್ಟ್ರೀಯ ಯೋಗ ದಿನ ೧೦ ವರ್ಷಗಳ ಐತಿಹಾಸಿಕ ಪಯಣವನ್ನು ಪೂರ್ಣಗೊಳಿಸಿದೆ. ತಾವು ೨೦೧೪ರಲ್ಲಿ ವಿಶ್ವಸಂಸ್ಥೆಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನವನ್ನು ಪ್ರಸ್ತಾಪಿಸಿದ್ದು, ಭಾರತದ ಈ ಪ್ರಸ್ತಾವನೆಗೆ ೧೭೭ ರಾಷ್ಟ್ರಗಳು ಬೆಂಬಲಿಸಿ, ಯೋಗ ದಿನವನ್ನು ಅಂಗೀಕರಿಸಿದೆ. ಅಂದಿನಿಂದಲೂ ಯೋಗ ದಿನ ಹೊಸ ದಾಖಲೆಗಳನ್ನು ಮಾಡುತ್ತಾ ಬಂದಿದೆ ಎಂದು ಹೇಳಿದರು. ವಿಶ್ವಾದ್ಯಂತ ಯೋಗ ಮಾಡುವವರ ಸಂಖ್ಯೆ ನಿರಂತರವಾಗಿ ಹೆಚ್ಚುತ್ತಿದೆ. ಯೋಗವು ಸಕಾರಾತ್ಮಕ ಶಕ್ತಿಯನ್ನು ನೀಡುವುದರಿಂದ ಜನರು ಯೋಗಾಭ್ಯಾಸವನ್ನು ಅಳವಡಿಸಿಕೊಳ್ಳುತ್ತಿದ್ದಾರೆ. ಯೋಗಾಸನದಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಸಲಿದೆ. ಸಮಾಜದಲ್ಲಿ ಸ್ವಾಸ್ಥ್ಯಕ್ಕೆ ಯೋಗ ಅಗತ್ಯ ಎಂದು ತಿಳಿಸಿದರು.

**<><*<><>*><>**

ಲೋಕಸಭೆ ಸ್ಪೀಕರ್ ಓಂ ಬಿರ್ಲಾ, ಸಂಸತ್ ಭವನ ಸಂಕೀರ್ಣದಲ್ಲಿ ಯೋಗ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಯೋಗಕ್ಕೆ ಜಾಗತಿಕ ಮನ್ನಣೆ ಇದ್ದು, ಒಟ್ಟಾರೆ ಮಾನವ ಆರೋಗ್ಯದ ಅಡಿಪಾಯವನ್ನು ರೂಪಿಸುತ್ತದೆ. ಯೋಗವು ಎಲ್ಲಾ ಸಾಂಸ್ಕೃತಿಕ ಮತ್ತು ಧಾರ್ಮಿಕ ಗಡಿಗಳನ್ನು ಮೀರಿದ್ದು, ನಮ್ಮೊಳಗೆ ನೆಲೆಸಿರುವ ಶಕ್ತಿಯಾಗಿದೆ ಎಂದು ಹೇಳಿದರು. ಡೆಹ್ರಾಡೂನ್‌ನ ಇಂದಿರಾ ಗಾಂಧಿ ರಾಷ್ಟ್ರೀಯ ಅರಣ್ಯ ಅಕಾಡೆಮಿಯಲ್ಲಿ ಆಯೋಜಿಸಿದ್ದ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾರತೀಯ ಅರಣ್ಯ ಸೇವೆಯ ತರಬೇತಿ ಅಧಿಕಾರಿಗಳೊಂದಿಗೆ ಕೇಂದ್ರ ಅರಣ್ಯ ಸಚಿವ ಭೂಪೇಂದ್ರ ಯಾದವ್ ಭಾಗವಹಿಸಿ, ಯೋಗಾಭ್ಯಾಸ ಮಾಡಿದರು. ದೇಶಾದ್ಯಂತ ಯೋಗ ದಿನವನ್ನು ಆಚರಿಸಲಾಯಿತು.

ಎನ್‌ಸಿಸಿ ಕೆಡೆಟ್‌ಗಳು, ಎನ್‌ಎಸ್‌ಎಸ್, ಸ್ಕೌಟ್ಸ್ ಮತ್ತು ಗೈಡ್ಸ್ ಸೇರಿದಂತೆ ಸ್ವಯಂ ಸೇವಕರು ಮತ್ತು ನಾಗರಿಕರು ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

<><*<><>*><>

ವಿವಿಧ ದೇಶಗಳಲ್ಲಿ ೧೦ನೇ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ಅಮೆರಿಕ, ಜರ್ಮನಿ, ಜಪಾನ್ ಸೇರಿದಂತೆ ವಿವಿಧ ರಾಷ್ಟ್ರಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿ, ಯೋಗದ ಮಹತ್ವವನ್ನು ಸಾರಲಾಯಿತು. ವಿಶ್ವಸಂಸ್ಥೆಯ ಪ್ರಧಾನ ಕಚೇರಿ ಜಿನಿವಾದಲ್ಲಿ ನಡೆದ ಯೋಗ ದಿನಾಚರಣೆಯ ನೇತೃತ್ವವನ್ನು ಆರ್ಟ್ ಆಫ್ ಲಿವಿಂಗ್‌ನ ರವಿಶಂಕರ್ ಗುರೂಜಿ ವಹಿಸಿದ್ದರು. ಇದೇ ವೇಳೆ, ಆರ್ಟ್ ಆಫ್ ಲಿವಿಂಗ್ ಫೌಂಡೇಶನ್ ದುಸಿತ್ ಥಾನಿ ದುಬೈನಲ್ಲಿ ಆಯೋಜಿಸಿದ್ದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ೧೫೦ಕ್ಕೂ ಹೆಚ್ಚು ಜನರು ಭಾಗಿಯಾಗಿದ್ದರು. ನ್ಯೂಯಾರ್ಕ್ ನಗರದ ಐಕಾನಿಕ್ ಟೈಮ್ಸ್ ಸ್ಕ್ವೇರ್‌ನಲ್ಲಿ ವಿವಿಧ ದೇಶಗಳ ಸುಮಾರು ಹತ್ತು ಸಾವಿರ ನಾಗರಿಕರು ಯೋಗ ಪ್ರದರ್ಶಿಸಿದರು. ಬಾಂಗ್ಲಾದೇಶದ ಢಾಕಾದ ಭಾರತದ ರಾಯಭಾರಿ ಕಚೇರಿಯಲ್ಲಿ ಅಂತಾರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಯಿತು. ಬಾಂಗ್ಲಾದೇಶದ ೧೩ ಯೋಗ ಸಂಸ್ಥೆಗಳು ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದವು.

<><*<><>*><>

ಆಕಾಶವಾಣಿ ಸುದ್ದಿಯು ಭಾರತದ ಅತ್ಯಂತ ವಿಶ್ವಾಸಾರ್ಹ ಸುದ್ದಿ ಸಂಸ್ಥೆಗಳಲ್ಲಿ ಒಂದು ಎಂದು ಪರಿಗಣಿಸಲಾಗಿದೆ. ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದ ರಾಯಿಟರ್ಸ್ ಇನ್‌ಸ್ಟಿಟ್ಯೂಟ್ ಫಾರ್ ದಿ ಸ್ಟಡಿ ಆಫ್ ಜರ್ನಲಿಸಂ ನಡೆಸಿದ ಇತ್ತೀಚಿನ ಸಮೀಕ್ಷೆಯು, ರಾಷ್ಟ್ರದ ಮಾಧ್ಯಮ ಕ್ಷೇತ್ರದಲ್ಲಿ ಆಕಾಶವಾಣಿ ಸುದ್ದಿಯು ಪ್ರಮುಖ ಸ್ಥಾನವನ್ನು ದೃಢಪಡಿಸಿದೆ. ಡಿಜಿಟಲ್ ಸುದ್ದಿ ವರದಿ ೨೦೨೪ರ ಪ್ರಕಾರ, ಆಕಾಶವಾಣಿ ಸುದ್ದಿಯು ವಿಶ್ವಾರ್ಹತೆಯಲ್ಲಿ ದೇಶದ ಇತರೆ ಪ್ರಮುಖ ಮಾಧ್ಯಮ ಸಂಸ್ಥೆಗಳಿಗಿಂತ ಗಮನಾರ್ಹವಾಗಿ ಹೆಚ್ಚಿನ ಅಂಕಗಳನ್ನು ಪಡೆದಿದೆ. ಈ ಸಾಧನೆ ಕುರಿತು ಪ್ರತಿಕ್ರಿಯಿಸಿದ ಪ್ರಸಾರ ಭಾರತಿ ಅಧ್ಯಕ್ಷ ನವನೀತ್ ಕುಮಾರ್ ಸೆಹಗಲ್, ಎಲ್ಲಾ ಸಂದರ್ಭಗಳಲ್ಲಿಯೂ ಸತ್ಯವನ್ನು ಪ್ರಸಾರ ಮಾಡಲು ಆಕಾಶವಾಣಿ ಸುದ್ದಿಯ ಅಚಲ ಬದ್ಧತೆಗೆ ಇದು ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ.

<><*<><>*><>

ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ವಿಚಾರಣಾ ನ್ಯಾಯಾಲಯ ನೀಡಿದ್ದ ಜಾಮೀನಿಗೆ ದೆಹಲಿ ಹೈಕೋರ್ಟ್ ತಡೆ ನೀಡಿದೆ. ದೆಹಲಿಯ ರೋಜ್ ಅವೆನ್ಯೂ ನ್ಯಾಯಾಲಯವು ನಿನ್ನೆ ಕೇಜ್ರಿವಾಲ್ ಅವರಿಗೆ ೧ ಲಕ್ಷ ರೂಪಾಯಿ ಬಾಂಡ್ ಮೇಲೆ ಜಾಮೀನು ನೀಡಿತ್ತು. ವಿಚಾರಣಾ ನ್ಯಾಯಾಲಯದ ಆದೇಶದ ವಿರುದ್ಧ ಜಾರಿ ನಿರ್ದೇಶನಾಲಯವು ಇಂದು ದೆಹಲಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸುಧೀರ್ ಕುಮಾರ್ ಜೈನ್ ಮತ್ತು ರವೀಂದ್ರ ದುದೇಜಾ ಅವರಿದ್ದ ನ್ಯಾಯಪೀಠ, ಇ.ಡಿ. ಸಲ್ಲಿಸಿರುವ ಅರ್ಜಿಯ ವಿಚಾರಣೆ ಪೂರ್ಣಗೊಳ್ಳುವವರೆಗೆ ಕೇಜ್ರಿವಾಲ್ ಅವರನ್ನು ಜೈಲಿನಿಂದ ಬಿಡುಗಡೆ ಮಾಡುವಂತಿಲ್ಲ ಎಂದು ತಡೆಯಾಜ್ಞೆ ನೀಡಿತು.

<><*<><>*><>

ಹಜ್ ಯಾತ್ರೆಯಲ್ಲಿ ಇದುವರೆಗೂ ೯೮ ಭಾರತೀಯ ಯಾತ್ರಿಕರು ಪ್ರಾಣ ಕಳೆದುಕೊಂಡಿದ್ದಾರೆ. ಈ ವರ್ಷ ೪೦ ಸಾವಿರ ಹಿರಿಯ ಯಾತ್ರಿಕರು ಸೇರಿದಂತೆ ಒಟ್ಟು ಒಂದು ಲಕ್ಷ ೭೫ ಸಾವಿರ ಭಾರತೀಯ ಯಾತ್ರಿಕರು ಹಜ್‌ಗೆ ಭೇಟಿ ನೀಡಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್, ಜೆಡ್ಡಾದಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಭಾರತೀಯ ಯಾತ್ರಾರ್ಥಿಗಳಿಗೆ ನೆರವು ನೀಡುವ ಕಾರ್ಯದಲ್ಲಿ ತೊಡಗಿದೆ ಎಂದು ಹೇಳಿದ್ದಾರೆ. ಭಾರತ ಮತ್ತು ಬಾಂಗ್ಲಾದೇಶ ತಮ್ಮ ವಿಶೇಷ ಸಂಬಂಧವನ್ನು ಬಲಪಡಿಸಲು ಬದ್ಧವಾಗಿವೆ. ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರು ಭಾರತದ ಪ್ರವಾಸದಲ್ಲಿದ್ದಾರೆ. ನಾಳೆ ಉಭಯ ರಾಷ್ಟ್ರಗಳ ನಡುವೆ ಹಲವು ಒಪ್ಪಂದಗಳು ಏರ್ಪಡಲಿವೆ ಎಂದು ತಿಳಿಸಿದ್ದಾರೆ. ಕೆನಡಾದಲ್ಲಿ ಖಲಿಸ್ತಾನಿ ಚಟುವಟಿಕೆಗಳ ಕುರಿತು ಮಾತನಾಡಿದ ಅವರು, ಖಲಿಸ್ತಾನಿ ಚಟುವಟಿಕೆಗಳು ಭಾರತಕ್ಕೆ ಗಂಭೀರ ಕಾಳಜಿಯ ವಿಷಯವಾಗಿದೆ. ಕ್ರಮ ಕೈಗೊಳ್ಳುವಂತೆ ಕೆನಡಾ ಸರ್ಕಾರಕ್ಕೆ ಭಾರತ ಪದೇ ಪದೆ ಕರೆ ನೀಡುತ್ತಿದೆ. ಭಾರತ-ವಿರೋಧಿ ಚಟುವಟಿಕೆಗಳಿಗೆ ರಾಜಕೀಯ ಜಾಗ ಕಲ್ಪಿಸುವವರನ್ನು ಮತ್ತು ಹಿಂಸಾಚಾರವನ್ನು ಪ್ರತಿಪಾದಿಸುವವರನ್ನು ತಡೆಯಬೇಕಿದೆ ಎಂದು ಪ್ರತಿಪಾದಿಸಿದ್ದಾರೆ. ರಷ್ಯಾದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಇಬ್ಬರು ಭಾರತೀಯರ ಸಾವಿನ ಕುರಿತು ಪ್ರತಿಕ್ರಿಯಿಸಿದ ರಣಧೀರ್ ಜೈಸ್ವಾಲ್, ರಷ್ಯಾದ ಅಧಿಕಾರಿಗಳೊಂದಿಗೆ ಭಾರತ ಸಂಪರ್ಕದಲ್ಲಿದೆ. ರಷ್ಯಾದ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಭಾರತೀಯರವನ್ನು ಶೀಘ್ರ ಬಿಡುಗಡೆಗೊಳಿಸಿ, ಭಾರತಕ್ಕೆ ವಾಪಸ್ ಕಳುಹಿಸಬಹುದು ಎಂದು ಭರವಸೆ ವ್ಯಕ್ತಪಡಿಸಿದ್ದಾರೆ.

<><*<><>*><>

ತಮಿಳುನಾಡಿನ ಕಲ್ಲಕುರಿಚಿಯಲ್ಲಿ ನಡೆದ ಕಳ್ಳಬಟ್ಟಿ ದುರಂತದಲ್ಲಿ ಅಕ್ರಮ ಮದ್ಯ ಸೇವಿಸಿ ಅಸ್ವಸ್ಥರಾಗಿದ್ದ ೧೬೫ ಜನರ ಪೈಕಿ ೪೭ ಮಂದಿ ಸಾವನ್ನಪ್ಪಿದ್ದು, ೧೧೮ ಮಂದಿ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಚಿಕಿತ್ಸೆ ಪಡೆಯುತ್ತಿರುವ ೧೧೮

ಜನರ ಪೈಕಿ ೬ ಮಂದಿಯ  ಸ್ಥಿತಿ ಗಂಭೀರವಾಗಿದ್ದು, ಚಿಕಿತ್ಸೆ ನಂತರ ೬೮ ಜನರ  ಆರೋಗ್ಯ ಸ್ಥಿತಿ ಸುಧಾರಿಸುತ್ತಿದೆ ಎಂದು ಅಲ್ಲಿನ ಜಿಲ್ಲಾಧಿಕಾರಿ ತಿಳಿಸಿದ್ದಾರೆ. ಇದೇ ವೇಳೆ ಕಳ್ಳಬಟ್ಟಿ ದುರಂತಕ್ಕೆ ಸಂಬಂಧಿಸಿ, ನಾಲ್ವರನ್ನು ಬಂಧಿಸಲಾಗಿದ್ದು, ೧೫ ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಈ ಕುರಿತು ಮಾತನಾಡಿದ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್, ಕಳ್ಳಬಟ್ಟಿ ದುರಂತಕ್ಕೆ ಕಾರಣಾರದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಏಕ ವ್ಯಕ್ತಿ ಆಯೋಗ ಸಲ್ಲಿಸುವ ವರದಿಯ ಅನುಸಾರ ಸರ್ಕಾರ ಕ್ರಮ ಕೈಗೊಳ್ಳಲಿದೆ. ಪೋಷಕರನ್ನು ಕಳೆದುಕೊಂಡ ಮಕ್ಕಳ ಶಿಕ್ಷಣದ ಜವಾಬ್ದಾರಿಯನ್ನು ಸರ್ಕಾರ ವಹಿಸಿಕೊಳ್ಳಲಿದೆ. ಜತೆಗೆ ಮಕ್ಕಳ ಹೆಸರಿನಲ್ಲಿ ತಲಾ ೫ ಲಕ್ಷ ರೂಪಾಯಿ ಠೇವಣಿ ಇಡಲಾಗುವುದು. ಅವರಿಗೆ ೧೮ ವರ್ಷ ತುಂಬಿದ ನಂತರ, ಬಡ್ಡಿ ಸಮೇತ ಅವರಿಗೆ ಈ ಹಣ  ಸಂದಾಯವಾಗಲಿದೆ. ಅಲ್ಲದೇ ಅವರ ಪಾಲನೆಗಾಗಿ ಪ್ರತಿ ತಿಂಗಳು ೫ ಸಾವಿರ ರೂಪಾಯಿಗಳನ್ನು ಪಾವತಿಸಲಾಗುತ್ತದೆ ಎಂದು ಘೋಷಿಸಿದ್ದಾರೆ. ಈಗಾಗಲೇ ತಮಿಳುನಾಡು ಸರ್ಕಾರ, ದುರಂತದಲ್ಲಿ ಮೃತಪಟ್ಟ ಕುಟುಂಬಗಳಿಗೆ ತಲಾ ೧೦ ಲಕ್ಷ ರೂಪಾಯಿ ಹಾಗೂ ಅಸ್ವಸ್ಥಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದೆ.

<><*<><>*><>

ಕರ್ನಾಟಕ ದಕ್ಷಿಣ ಒಳನಾಡು ಮತ್ತು ಕರಾವಳಿ, ಕೇರಳ ಮತ್ತು ಗೋವಾದಲ್ಲಿ ಮುಂದಿನ ೫ ದಿನಗಳಲ್ಲಿ ಧಾರಾಕಾರ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಕುರಿತು ಅಕಾಶವಾಣಿಗೆ ಮಾಹಿತಿ ನೀಡಿದ ಭಾರತೀಯ ಹವಾಮಾನ ಇಲಾಖೆಯ ವಿಜ್ಞಾನಿ ಸೋಮ ಸೇನ್ ರಾಯ್, ಮುಂದಿನ ೫ ದಿನಗಳಲ್ಲಿ ಅಸ್ಸಾಂ, ಅರುಣಾಚಲ ಪ್ರದೇಶ, ಮೇಘಾಲಯ, ನಾಗಾಲ್ಯಾಂಡ್, ಮಣಿಪುರ, ಮಿಜೋರಾಂ, ತ್ರಿಪುರ ಮತ್ತು ಪಶ್ಚಿಮ ಬಂಗಾಳದ ಹಲವೆಡೆ ಹಾಗೂ ಉತ್ತರ ಪ್ರದೇಶ ಮತ್ತು ಜಮ್ಮುವಿನ ಕೆಲವು ಪ್ರದೇಶಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

<><*<><>*><>

ಇಟಲಿಯ ಗೈಬಾದಲ್ಲಿ ನಡೆಯುತ್ತಿರುವ ಡಬ್ಲ್ಯೂಟಿಎ ವೆನಿಟೊ ಓಪನ್ ಟೆನಿಸ್ ಪಂದ್ಯಾವಳಿಯ ಮಹಿಳೆಯರ ಸಿಂಗಲ್ಸ್ ವಿಭಾಗದಲ್ಲಿ ಇಂದು ನಡೆಯುತ್ತಿರುವ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ಅಂಕಿತಾ ರೈನಾ ಮತ್ತು ಸ್ವಿಟ್ಜರ್ಲೆಂಡ್‌ನ ಸುಸಾನ್ ಬಾಂಡೆಚ್ಚಿ ಮುಖಾಮುಖಿಯಾಗಿದ್ದಾರೆ. ಪಂದ್ಯ ಪ್ರಗತಿಯಲ್ಲಿದೆ. ನಿನ್ನೆ ನಡೆದ ಪ್ರೀ-ಕ್ವಾರ್ಟರ್ ಪಂದ್ಯದಲ್ಲಿ ರೊಮೇನಿಯಾದ ಇರಿನಾ ಬಾರಾ ಅವರನ್ನು ೬-೨, ೨-೬, ೬-೦ ಅಂಕಗಳಿಂದ ಅಂಕಿತಾ ರೈನಾ ಪರಾಭವಗೊಳಿಸಿದ್ದರು.

<><*<><>*><>

ಐಸಿಸಿ ಟಿ-೨೦ ವಿಶ್ವಕಪ್ ಪಂದ್ಯಾವಳಿಯ ಸೆಂಟ್‌ಲೂಸಿಯಾದಲ್ಲಿ ನಡೆಯುವ ಸೂಪರ್ ೮ರ ಸುತ್ತಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡ, ದಕ್ಷಿಣ ಆಫ್ರಿಕಾವನ್ನು ಎದುರಿಸಲಿದೆ.  ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ-ಸೆನ್ಸೆಕ್ಸ್ ೨೬೯ ಅಂಕಗಳು ಇಳಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೨೧೦ ಅಂಕಗಳು ದಾಖಲಾಗಿದೆ. ಅದೇ ರೀತಿ, ರಾಷ್ಟ್ರೀಯ ಸಂವೇದಿ ಸೂಚ್ಯಂಕ-ನಿಫ್ಟಿ ೬೬ ಅಂಕಗಳು ಇಳಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೫೦೧ ಅಂಕಗಳು ದಾಖಲಾಗಿದೆ.  ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೩ ರೂಪಾಯಿ ೫೪ ಪೈಸೆಯಷ್ಟಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**